**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ. 1243/2023**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

ಆರೋಪಿ/ತರು ಃ ಗುರುಮೂರ್ತಿ ಮತ್ತು ಇತರರು

-ಃದೋಷಾರೋಪಣೆಃ-

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

1. ಗುರುಮೂರ್ತಿ ಬಿನ್ ವೇಲಾಯುದನ್ ಕೆ, 36 ವರ್ಷ, ಎಂ.ಎ. ವಿದ್ಯಾರ್ಥಿ, ವಾಸಃಎಂ.ಸಿ.ಹಳ್ಳಿ ಗ್ರಾಮ, ತರೀಕೆರೆ ತಾಃ
2. ರಾಜೇಶ್ವರಿ ಬಿನ್ ವೇಲಾಯುದನ್, 47 ವರ್ಷ, ಮನೆ ಕೆಲಸ, ವಾಸಃಎಂ.ಸಿ.ಹಳ್ಳಿ ಗ್ರಾಮ, ತರೀಕೆರೆ ತಾಃ
3. ಮಹೇಶ್ ಬಿನ್ ವೇಲಾಯುದನ್, 24 ವರ್ಷ, ಪದವಿ ವಿದ್ಯಾರ್ಥಿ, ವಾಸಃಎಂ.ಸಿ.ಹಳ್ಳಿ ಗ್ರಾಮ, ತರೀಕೆರೆ ತಾಃ
4. ಶಾಲಿನಿ ಕೋಂ ಅಶೋಕ, 28 ವರ್ಷ, ಮನೆ ಕೆಲಸ, ವಾಸಃಎಂ.ಸಿ.ಹಳ್ಳಿ ಗ್ರಾಮ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ24.10.2022 ರಾತ್ರಿ ಸುಮಾರು 8-15 ರ ಸಮಯದಲ್ಲಿ ಹೆಚ್ ರಂಗಾಪುರ ಗ್ರಾಮದ ಚಾಸಾ-8 ಹರೀಶರವರಿಗೆ ಕುಮಾರ್ ರವರ ಕ್ಯಾಂಟಿನ್ ಮುಂದೆ ಪಟಾಕಿ ಹಚ್ಚುವ ಕ್ಷುಲ್ಲಕ ವಿಚಾರಕ್ಕೆ ಗಲಾಟೆ ಆಗುತ್ತಿದ್ದು, ಇದನ್ನು ನೋಡಿದ ಚಾಸಾ-1 ರವರ ಗಂಡ ಮಾರ್ಟಿನ್ ರವರು ಗಲಾಟೆ ಬಿಡಿಸಲು ಪ್ರಯತ್ನಿಸಿದಾಗ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಗಂಡ ಮಾರ್ಟಿರವರಿಗೆ ನೀನು ಯಾರೋ ಬೋಳಿಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ**.504** ಸಹಕಲಂ **34** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಮನೆಗೆ ಅತಿಕ್ರಮ ಪ್ರವೇಶ ಮಾಡಲು ಪ್ರಯತ್ನಿಸಿ ಬಾಗಿಲಿಗೆ ದೊಣ್ಣೆಯಿಂದ ಹೊಡೆದು ಜಖಂ ಮಾಡಿ ನಷ್ಟವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**427** ಸಹಕಲಂ **34** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಚಾಸಾ-1 ರವರು ತನ್ನ ಗಂಡನಿಗೆ ಹೊಡೆಯಬೇಡಿ ಎಂದು ಆರೋಪಿತರಾದ ನಿಮಗೆ ಕಾಲು ಹಿಡಿದು ಅಂಗಲಾಚಿದ್ದರು ಸಹ ಕನಿಕರ ತೋರದೇ ಚಾಸಾ-1 ರವರು ಗರ್ಭಿಣಿ ಎಂದು ತಿಳಿದಿದ್ದರೂ ಸಹ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರನ್ನು ತಳ್ಳಿ ಅವರಿಗೆ ಅವಮಾನವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**354** ಸಹಕಲಂ **34** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 1ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಕಾಲಿನಿಂದ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**323** ಸಹಕಲಂ **34** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 1ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ದೊಣ್ಣೆಯಿಂದ ತಲೆಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**324** ಸಹಕಲಂ **34** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರಿಗೆ ನಮ್ಮ ವಿಷಯಕ್ಕೆ ಬಂದ್ರೆ ನಿಮ್ಮನ್ನು ಜೀವ ಸಮೇತ ಬಿಡುವುದಿಲ್ಲವೆಂದು ಹೇಳಿ ಬೆದರಿಕೆ ಹಾಕಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**506** ಸಹಕಲಂ **34** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ25.11.2024

Sd/-
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉಃ

ಎ-1

ಎ-2

ಎ-3

ಎ-4

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ

ಎ-1
ಎ-2

ಎ-3

ಎ-4

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ25.11.2024

Sd/-

ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ